ಅ) ಕೊಡಗು ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಕೇಂದ್ರ ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆಯೇ,

ಆ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು,

ಇ) ಎಲ್ಲಿ ಪ್ರಾರಂಭಿಸಲಾಗುವುದು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಯವರು)

ಅ) ಕೊಡಗು ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಉದ್ಯಾನವನ್ನು ಸ್ಥಾಪಿಸುವ ಬಗ್ಗೆ ಪ್ರಸ್ತಾವನೆಯು ಸಧ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

374 (826) ಶ್ರೀ ಜೀವಿಜಯ ಬಿ ಎ (ಸೋಮವಾರಪೇಟೆ) ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕಿನ ಶಿರಂಗಾಲ ದಿಂದ ವೀರಾಜಪೇಟೆ ತಾಲ್ಲೂಕಿನ ಮಾಕುಟ್ಟದ ರಸ್ತೆಯು ಸಂಚಾರಕ್ಕೆ ಯೋಗ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಸರ್ಕಾರ ಈ ಅಂತರ್ ರಾಜ್ಯ ರಸ್ತೆಯನ್ನು ದುರಸ್ಥಿ ಗೊಳಿಸಲು ಪ್ರಸ್ತಾವನೆಯನ್ನು ಇಲಾಖೆಯಿಂದ ಕಳುಹಿಸಿದ್ದರೂ ಯಾವ ಕಾರಣದಿಮದ ಇದುವರೆಗೆ ಮಂಜೂರಾತಿ ನೀಡಿರುವುದಿಲ್ಲ ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಹಾಗೂ ಇಂಧನ ಸಚಿವರು)

ಅ) ಬಂದಿದೆ

ಆ) ಸದರಿ ಪ್ರಸ್ತಾವನೆಯನ್ನು ಸರ್ಕಾರದಲ್ಲಿ ಪರಿಶೀಲಿಸಲಾಗಿದ್ದು, ಅನುದಾನದ ಲಭ್ಯತೆಗನುಸಾರವಾಗಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವತಿಯಿಂದ ಕಾಮಗಾರಿಯನ್ನು ಕೈಗೊಳ್ಳಲು ಕ್ರಮ ತೆಗೆದುಕೊಳ್ಳಲಾಗುವುದು

375 (827) ಶ್ರೀ ಜೀವಿಜಯ ಬಿ ಎ (ಸೋಮವಾರಪೇಟೆ) ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕಿನ ಶನಿವಾರ ಸಂತೆಯಿಂದ ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ಹೊಸೂರು ರಸ್ತೆ ಮತ್ತು ಸಕಲೇಶಮರ ತಾಲ್ಲೂಕಿನ ಕೌಕೋಡಿಯಿಂದ ಸೋಮವಾರಪೇಟೆ ಚೀಟಿಕಟ್ಟೆವರೆಗೆ ರಾಜ್ಯ ಹೆದ್ದಾರಿಯಾಗಿ ಉನ್ನತೀಕರಿಸಲು ಮುಖ್ಯಮಂತ್ರಿ ಮತ್ತು